ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ

C.C No. 445/2015
CW-3 PW-4

ಹೆಸರು : ಬಾಬು ರಾವ್

ತಂದೆ ಹೆಸರು : ಚಂದ್ರಮಪ್ಪ ತೊಟ್ನಳ್ಳಿ

ವಯಸ್ಸು : 45 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸ ಸ್ಥಳ : ಇವಣಿ

---

ಪ್ರಮಾಣವಚನ ಭೋಧಿಸಲಾಯಿತು. ದಿಃ 26-11-2025

ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ

1. ನನಗೆ ಚಾಸಾ-2ರವರ ಪರಿಚಯ ಇಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಊರಿಗೆ ಹೋಗುವಾಗ ಪೋಲೀಸರು ಕೆಲವೊಂದು ದಾಖಲೆಗಳ ಮೇಲೆ ನನ್ನ ಸಹಿಗಳನ್ನು ಪಡೆದಿರುತ್ತಾರೆ. ಸದರಿ ದಾಖಲೆಗಳಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಮಾಹಿತಿ ಇಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ.

2. ಸಾಕ್ಷಿಗೆ ಈಗ ನಿಪಿ- 3 ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಕಾರಣ ಸದರಿ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ನಿಪಿ- 3ರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಮಾಹಿತಿ ಇಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ

1. ದಿಃ 20.06.2015ರಂದು ಮಧ್ಯಾಹ್ನ 03.00 ರಿಂದ 04.00 ಗಂಟೆ ಸಮಯದಲ್ಲಿ ಪೋಲೀಸರು ನನ್ನ ಮತ್ತು ಚಾಸಾ-2ರವರ ಸಮಕ್ಷಮ ನಿಪಿ-3ರಂತೆ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ. ಪಂಚನಾಮೆ ಜರುಗಿಸಿದ ಕಾರಣವೇ ನೀವು ನಿಪಿ-3ಕ್ಕೆ ಸಹಿ ಮಾಡಿದ್ದೀರಿ ಎಂದರೆ ಸರಿಯಲ್ಲ. ನಿಪಿ- 3ರಂತೆ ಪಂಚನಾಮೆಯನ್ನು ಜರುಗಿಸಿದ್ದರೂ ಸಹ ಈಗ ಆರೋಪಿಯೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀಮತಿ ಎಮ್.ಎಸ್.ಎಸ್. ವಕೀಲರಿಂದ - ಏನು ಇಲ್ಲ</u>

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು,
ಚಿತ್ತಾಪೂರ.